NEWSPAPER. ಕನ್ನಡಪ್ರಭ 21 ದಿನಾಂಕ : DATE : 7/11/20

# ಮಳೆಗೆ ಕುಸಿದ ಶೆಡ್: ಕೂಲಿ ಕಾರ್ಮಿಕ ಸಾವು

## ಗೋಡೆ ಕುಸಿತ: ಮಲಗಿದ್ದ ಕಾರ್ಮಿಕರ ಮೇಲೆ ಬಿದ್ದ ಕಬ್ಬಿಣ ಸರಳುಗಳು | ಮತ್ತಿಬ್ಬರಿಗೆ ಗಾಯ | ಮಹಾಲಕ್ಷ್ಮಿ ಲೇಔಟ್‌ನಲ್ಲಿ ಘಟನೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ನಗರದಲ್ಲಿ ಗುರುವಾರ ರಾತ್ರಿ ಸುರಿದ ಮಳೆಯಿಂದ ತಾತ್ಕಾಲಿಕ್ ಶೆಡ್ ಕುಸಿದು ಬಿದ್ದು ಕಾರ್ಮಿಕನೊಬ್ಬ ಮೃತಪಟ್ಟು, ಮತ್ತಿಬ್ಬರು ಗಂಭೀರವಾಗಿ ಗಾಯಗೊಂಡಿರುವ ಘಟನೆ ಮಹಾಲಕ್ಷ್ಮಿ ಲೇಔಟ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.

ಬಿಹಾರ ಮೂಲದ ಪುರಾನ್ ಪೂಜಾರಿ (19) ಮೃತದುರ್ದೈವಿ. ಘಟನೆಯಲ್ಲಿ ಗಾಯಗೊಂಡಿರುವ ಭಾವನಿ ಸಿಂಗ್ ಹಾಗೂ ಮಿಥುನ್ ಎಂಬುವರು ಕೆ.ಸಿ.ಜನರಲ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿದ್ದು, ಅವರು ಪ್ರಾಣಾಪಾಯದಿಂದ ಸುರಕ್ಷಿತವಾಗಿದ್ದಾರೆ. ಹಳೇ ಗೋಡೆಗೆ ತಾಕಿಕೊಂಡಂತೆ ತಾತ್ಕಾಲಿಕ ಶೆಡ್ ನಿರ್ಮಿಸಲಾಗಿತ್ತು. ರಾತ್ರಿ ಸುರಿದ ಮಳೆಯಿಂದ ಗೋಡೆ ನೆನೆದು ಮುಂಜಾನೆ 5ರ ಸುಮಾರಿಗೆ ಕುಸಿದು ಬಿದ್ದಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.

ಸದಾಶಿವನಗರ ಸಮೀಪ ಸಿಕೊನ್ ಕಂಪನಿಯು ಖಾಸಗಿ ಶಾಲೆಯೊಂದರ ಕಟ್ಟಡ ನಿರ್ಮಿಸುತ್ತಿದೆ. ಕೆಲವು ತಿಂಗಳಿಂದ ಆ ಕಾಮಗಾರಿಯಲ್ಲಿ ಬಿಹಾರ ಮೂಲದ 60 ಕಾರ್ಮಿಕರು ಕೆಲಸ ಮಾಡುತ್ತಿದ್ದರು. ಇಸ್ಕಾನ್ ದೇವಾಲಯ ಸಮೀಪ ಆ ಕಾರ್ಮಿಕರಿಗೆ ತಾತ್ಕಾಲಿಕ ಶೆಡ್‌ಗಳನ್ನು ನಿರ್ಮಿಸಿ ಕಾರ್ಮಿಕರಿಗೆ ವಸತಿ ಸೌಲಭ್ಯ ಕಲ್ಪಿಸಿತು. ಅಂತೆಯೇ ಪೂರಾನ್ ಪೂಜಾರಿ, ಭಾವನಿ ಸಿಂಗ್ ಹಾಗೂ ಮಿಥುನ್ ನೆಲೆಸಿದ್ದರು.

ಹಳೇ ಗೋಡೆಗೆ ಕಬ್ಬಿಣದ ಸರಳುಗಳನ್ನು ಹಾಕಿ ಶೆಡ್‌ಗಳು ನಿರ್ಮಾಣವಾಗಿದ್ದವು. ಗುರುವಾರ ರಾತ್ರಿ ಸುರಿದ ಮಳೆಯಿಂದ ಗೋಡೆ ಕುಸಿದಿದೆ. ಆಗ ಕಬ್ಬಿಣದ ಸರಳುಗಳು ನಿದ್ರೆಯಲ್ಲಿದ್ದ ಕಾರ್ಮಿಕರ ಮೇಲೆ ಬಿದ್ದಿವೆ. ಇದರಿಂದ ತಲೆಗೆ ಗಂಭೀರವಾಗಿ ಪೆಟ್ಟಾಗಿ ಪೂಜಾರಿ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಕೂಡಲೇ ಗಾಯಾಳುಗಳನ್ನು ಸಹ ಕಾರ್ಮಿಕರು ಆಸ್ಪತ್ರೆಗೆ ಸಾಗಿಸಿದ್ದಾರೆ. ಚಿಕಿತ್ಸೆಗೆ ಗಾಯಾಳು ಸ್ಪಂದಿಸುತ್ತಿದ್ದಾರೆ. ಈ ಘಟನೆ ಸಂಬಂಧ ಸಿಕೊನ್ ಕಂಪನಿ ವಿರುದ್ಧ ನಿರ್ಲಕ್ಷ್ಯತನ ಆರೋಪದಡಿ ಪ್ರಕರಣ ದಾಖಲಿಸಿಕೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.



...ಮಳೆಗೆ ಕುಸಿದಿರುವ ಶೆಡ್.

# ವಾಡಿಕೆಗಿಂತ ಅಧಿಕ ಮಳೆ: ಅಂತರ್ಜಲ ಮಟ್ಟ ಹೆಚ್ಚಳ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ರಾಜಧಾನಿಯಲ್ಲಿ ಈ ಬಾರಿ ನಿರಂತರವಾಗಿ ಮಳೆ ಸುರಿದ ಪರಿಣಾಮ ಅಂತರ್ಜಲ ಹೆಚ್ಚಳವಾಗಿದೆ ಎಂದು ಬಿಬಿಎಂಪಿ ಕೆರೆ ಅಭಿವೃದ್ಧಿ ವಿಭಾಗದ ಮುಖ್ಯ ಅಭಿಯಂತರ ಬಿ.ಟಿ.ಮೋಹನ್ ಕೃಷ್ಣ ಹೇಳಿದರು.

ಮುಂದಿನ ವರ್ಷ ರಾಜಧಾನಿಗೆ ಬರ ಕಾಡಲಿದ್ದು, ಅಂತರ್ಜಲ ಭಾರೀ ಪ್ರಮಾಣದಲ್ಲಿ ಕುಸಿಯಲಿದೆ ಎಂದು ಹೇಳಲಾಗಿತ್ತು. ಇದೀಗ ಎಲ್ಲ ಲೆಕ್ಕಚಾರಗಳು ಬುಡಮೇಲಾಗಿದ್ದು, ವಾರ್ಷಿಕ ವಾಡಿಕೆಗಿಂತ 199 ಮಿಲಿ ಮೀಟರ್ ಹೆಚ್ಚುವರಿ ಮಳೆಯಾಗಿದೆ. ಇದರಿಂದ ನಗರದ 63 ಕೆರೆಗಳು ಭರ್ತಿಯಾಗಿವೆ. ನಗರದಲ್ಲಿ ಇರುವ ಒಟ್ಟು 210 ಕೆರೆಗಳ ಪೈಕಿ ಪಾಲಿಕೆಯಿಂದ ಅಭಿವೃದ್ಧಿ ಪಡಿಸಲಾಗಿದ್ದ 42 ಕೆರೆಗಳು ಭರ್ತಿಯಾಗಿವೆ. ಇನ್ನೂ 36 ಕೆರೆಗಳ ಅಭಿವೃದ್ಧಿಗೆ ಕ್ರಮ ಕೈಗೊಳ್ಳಲಾಗಿದೆ. ಕೆರೆಗಳು ಭರ್ತಿ ಆಗಿರುವುದರಿಂದ ಅಂತರ್ಜಲ ಮಟ್ಟ ಹೆಚ್ಚಳವಾಗಿದೆ ಎಂದರು.

ಈ ಕೆರೆಗಳಿಂದ 500 ಮೀಟರ್‌ನಿಂದ ಒಂದು ಕಿ.ಮೀ. ವ್ಯಾಪ್ತಿಯಲ್ಲಿರುವ ಕೊಳವೆ ಬಾವಿಗಳಲ್ಲಿ ಅಂತರ್ಜಲ ಹೆಚ್ಚಾಗಿದೆ. ನಗರದಲ್ಲಿ 1.20 ಲಕ್ಷಕ್ಕೂ ಅಧಿಕ ಕೊಳವೆಬಾವಿಗಳಿವೆ. ಅಂತರ್ಜಲ ಕುಸಿತದಿಂದ ಬತ್ತಿದ್ದ ಸುಮಾರು 30 ಸಾವಿರಕ್ಕೂ ಅಧಿಕ ಕೊಳವೆಬಾವಿಗಳಲ್ಲಿ ಜಲ ಮರುಪೂರಣಗೊಂಡಿದೆ ಎಂದು ಹೇಳಿದರು.